**<u>ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ರವರ ನ್ಯಾಯಾಲಯ,</u>**

**<u>ತರೀಕೆರೆ</u>**

**<u>ಸಂಚಾರಿ ನ್ಯಾಯಾಲಯ, ಅಜ್ಜಂಪುರ</u>**

**<u>ಸಿ.ಸಿ.ನಂಃ 44/2024</u>**

**<u>ಫಿರ್ಯಾದುದಾರರುಃ</u>** ಸರ್ಕಾರದ ಪರವಾಗಿ ಅಜ್ಜಂಪುರ ಪೊಲೀಸರು

**-: ವಿರುದ್ಧ :-**

**<u>ಆರೋಪಿಃ</u>**

1. ಶ್ರೀ ಪ್ರದೀಪ,
ಬಿನ್ ಶ್ರೀ ಚಂದ್ರಪ್ಪ,
30 ವರ್ಷಗಳು,

2. ಶ್ರೀ ಮಂಜಪ್ಪ,
ಬಿನ್ ಶ್ರೀ ಚಂದ್ರಪ್ಪ,
35 ವರ್ಷ,

3. ಶ್ರೀ ಪ್ರಶಿ ಯಾನೆ ಪ್ರಸನ್ನಕುಮಾರ,
ಬಿನ್ ಶ್ರೀ ಚಂದ್ರಪ್ಪ,
28 ವರ್ಷ,

4. ಶ್ರೀ ಚಂದ್ರಪ್ಪ,
ಬಿನ್ ಶ್ರೀ ಹಳ್ಳಪ್ಪ,
60 ವರ್ಷ,

ಎಲ್ಲರ ವಾಸಃ ಬಂಕನಕಟ್ಟೆ ಗ್ರಾಮ,
ಅಜ್ಜಂಪುರ ತಾಲ್ಲೂಕು.

**<u>ದೋಷಾರೋಪಣೆ</u>**

ಶ್ರೀ. ರಾಹುಲ್ ಶೆಟ್ಟಿಗಾರ್, ಬಿ.ಕಾಂ.(Hons.), ಎಲ್‌ಎಲ್.ಬಿ., ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕ 07.11.2023 ರಂದು ರಾತ್ರಿ 7.00 ಗಂಟೆಗೆ ಅಜ್ಜಂಪುರ ಪೋಲೀಸ್ ಠಾಣಾ ಸರಹದ್ದಿನ ಹಿರೇಕಾನವಂಗಲ ಗ್ರಾಮದಲ್ಲಿ ಚಾಸಾ-1/ ಶ್ರೀ ಬಸವರಾಜ ರವರು ವಾಸದ ಮನೆಯ ಮುಂದಿನ ಕಾಂಕ್ರೀಟ್ ರಸ್ತೆಯಲ್ಲಿ ಚಾಸಾ-1 ರವರು ಮನೆಗೆ ಬರಲು ಬರುತ್ತಿರುವಾಗ 1 ರಿಂದ 4 ನೇ ಆರೋಪಿತರಾದ ನೀವುಗಳು ಅಪರಾಧ ಮಾಡುವ ಸಮಾನ ಉದ್ದೇಶದಿಂದ ಚಾಸಾ-1 ರವರಿಗೆ ಬೋಳಿಮಗನೇ, ಸೂಳೆಮಗನೇ ಎಂದು ಚಾಸಾ-1 ರವರ ಶಾಂತಿಭಂಗ ಮಾಡುವ

ಉದ್ದೇಶದಿಂದ ಅವಾಚ್ಯ ಶಬ್ದಗಳಿಂದ ಬೈದು ಅವಮಾನಿಸಿರುತ್ತೀರಿ. ಈ ರೀತ್ಯ 1 ರಿಂದ 4 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 4 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ಆರೋಪಿಗಳಾದ ನೀವು ಚಾಸಾ-1 ರವರಿಗೆ ಕೈಯಿಂದ ಹೊಡೆದು ಎಳೆದಾಡಿ ಕಾಲಿನಿಂದ ತುಳಿದಿರುತ್ತೀರಿ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ. ಈ ರೀತ್ಯ 1 ರಿಂದ 4 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 4 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ನಿಮ್ಮಲ್ಲಿ 2 ನೇ ಆರೋಪಿ ದೊಣ್ಣೆಯಿಂದ ಚಾಸಾ-1 ಬೆನ್ನಿಗೆ ಹೊಡೆದಿರುತ್ತೀರಿ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯ 1 ರಿಂದ 4 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 4 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ಆರೋಪಿಗಳಾದ ನೀವು ಕೊಲೆ ಮಾಡುವುದಾಗಿ ಬೆದರಿಕೆ ಹಾಕಿರುತ್ತೀರಿ. ಈ ರೀತ್ಯ 1 ರಿಂದ 4 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಸದರಿ ಮೇಲ್ಕಂಡ 1 ರಿಂದ 4 ನೇ ಆರೋಪಿಗಳಾದ ನೀವು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮೇಲೆ ಹೇಳಿದ ಅಪರಾದಗಳನ್ನು ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗತಕ್ಕದ್ದೆಂದು ಆದೇಶಿಸಲಾಗಿದೆ.

ಪ್ರ:1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದಿರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಗಳ ಉತ್ತರಃ

ಆರೋಪಿ 1: Yes

ಆರೋಪಿ 2: Yes

ಆರೋಪಿ 3: Yes

ಆರೋಪಿ 4: Yes

ಪ್ರ:2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಗಳ ಉತ್ತರಃ

ಆರೋಪಿ 1:Pleaded not guilty and claimed to be tried

ಆರೋಪಿ 2: Pleaded not guilty and claimed to be tried

ಆರೋಪಿ 3: Pleaded not guilty and claimed to be tried

ಆರೋಪಿ 4: Pleaded not guilty and claimed to be tried

(ಆರೋಪಿತರಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ತಿಳಿಸಿ ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣಿಕರಿಸುತ್ತೇನೆ)

ದಿನಾಂಕ : 10.07.2025

ಸಹಿ/-

(ರಾಹುಲ್ ಶೆಟ್ಟಿಗಾರ್)

ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ

ಪ್ರ.ದ.ನ್ಯಾದಂ., ತರೀಕೆರೆ.

(ಸಂಚಾರಿ ನ್ಯಾಯಾಲಯ, ಅಜ್ಜಂಪುರ)

ಆರೋಪಿತರ ಸಹಿಃ